**ಓ.ಎಸ್. ನಂ. 554/2013 ಪಿ.ಡಬ್ಲೂ-1 ಹೆಸರು - ನಾಗರಾಜು**

**ಸಾಕ್ಷಿಯನ್ನು ದಿನಾಂಕಃ 23/05/2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ಪಾಟೀ ಸವಾಲುಃ 1 ನೇ ಪ್ರತಿವಾದಿ ಮತ್ತು ಅವರ ಪರ ವಕೀಲರನ್ನು ಕರೆಸಲಾಯಿತು. ಅವರು ಗೈರು ಹಾಜರು ಇರುತ್ತಾರೆ. ಆದೇಶ ಪುಟಗಳನ್ನು ಪರಿಶೀಲಿಸಲಾಗಿ ಈಗಾಗಲೇ ಪಾಟೀ ಸವಾಲಿಗೆ ಸಾಕಷ್ಟು ಸಮಯಾವಕಾಶ ನೀಡಲಾಗಿದೆ. ಆದ್ದರಿಂದ 1 ನೇ ಪ್ರತಿವಾದಿ ಪರವಾಗಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 2 ನೇ ಪ್ರತಿವಾದಿ ಪರ ಶ್ರೀ ಬಿ.ಡಿ.ಜಿ. ವಕೀಲರಿಂದಃ-**

ನಾನು ಮತ್ತು 1 ಮತ್ತು 2 ನೇ ಪ್ರತಿವಾದಿಯರು ಒಂದೇ ಊರಿನವರು ಎಂದರೆ ಸರಿ. ನನಗೆ 1 ನೇ ಪ್ರತಿವಾದಿಯ ತಂದೆ ಶಿವಪ್ಪ ಮತ್ತು 2 ನೇ ಪ್ರತಿವಾದಿಯ ತಂದೆ ಕರಿಯಪ್ಪ ಚಿರಪರಿಚಿತರು ಇದ್ದರು ಎಂದರೆ ಸರಿಯಲ್ಲ. ಈ ದಾವೆಯ 2 ನೇ ಪ್ರತಿವಾದಿಯು 1 ನೇ ಪ್ರತಿವಾದಿಯ ವಿರುದ್ಧ ಅಸಲು ದಾವಾ ಸಂಖ್ಯೆ 632/2012 ದಾಖಲಿಸಿರುವ ವಿಚಾರ ನಿಮಗೆ ತಿಳಿದಿದೆಯೇ ಎಂದು ಕೇಳಿದ ಪ್ರಶ್ನೆಗೆ ಸಾಕ್ಷಿಯು ತಿಳಿದಿಲ್ಲ ಎಂದು ನುಡಿಯುತ್ತಾರೆ. ಅಸಲು ದಾವಾ ಸಂಖ್ಯೆ 258/1961 ಮತ್ತು ಜಾರಿ ಅರ್ಜಿ ಸಂಖ್ಯೆ 362/1966 ರ ದಾಖಲಾತಿಗಳನ್ನು ಹಾಜರುಪಡಿಸಿದ್ದೇನೆ. ದಾವಾ ಸ್ವತ್ತು ಕೆ.ಐ.ಎ.ಡಿ.ಬಿ. ಗೆ ಸ್ವಾಧೀನವಾಗುವಾಗ ನಿಮಗೇನಾದರೂ ನೋಟೀಸ್ ಬಂದಿತ್ತೇ ಎಂದು ಕೇಳಿದ ಪ್ರಶ್ನೆಗೆ ಸಾಕ್ಷಿಯು ಆಗ ನನ್ನ ತಂದೆಯವರು ಇದ್ದರು ಎಂದು ನುಡಿಯುತ್ತಾರೆ. ಸದರಿ ನೋಟೀಸ್ ನಿಮ್ಮ ಬಳಿ ಇದೆಯೇ ಎಂದರೆ ಸಾಕ್ಷಿಯು ನನ್ನ ತಂದೆ ಬಳಿ ಇತ್ತು ಎಂದು ನುಡಿಯುತ್ತಾರೆ.

( ಮುಂದುವರೆದ ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.)

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**